# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 851 |
| ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 20.12.2021 |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸರ್ಕಾರದ ಅನುದಾನದಲ್ಲಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಎಷ್ಟು; (ವಿವರ ನೀಡುವುದು) ಸದರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳೆಷ್ಟು; (ವಿಶ್ವವಿದ್ಯಾಲಯವಾರು ವಿವರ ನೀಡುವುದು) | ರಾಜ್ಯದಲ್ಲಿ ಸರ್ಕಾರದ ಅನುದಾನದಲ್ಲಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಒಟ್ಟು 23.<br><br>ಸದರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿದೆ; |

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ ಬೋಧಕ ಹುದ್ದೆಗಳು | ಮಂಜೂರಾದ ಬೋಧಕೇತರ ಹುದ್ದೆಗಳು |
|---|---|---|---|
| 1 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ | 151 | 137 |
| 2 | ಕನ್ನಡ ವಿಶ್ವವಿದ್ಯಾಲಯ | 73 | 234 |
| 3 | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ | 120 | 272 |
| 4 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 137 | 574 |
| 5 | ಗುಲ್ಬರ್ಗ ವಿಶ್ವವಿದ್ಯಾಲಯ | 248 | 707 |
| 6 | ಬೆಂಗಳೂರು ನಗರ ವಿಶ್ವವಿದ್ಯಾಲಯ | 161 | 123 |
| 7 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 56<br>ಬೋಧಕ + ಬೋಧಕೇತರ<br>ಎರಡನ್ನೂ ಒಳಗೊಂಡಂತೆ | |
| 8 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 103 | 173 |
| 9 | ತುಮಕೂರು ವಿಶ್ವವಿದ್ಯಾಲಯ | 217 | 214 |
| 10 | ದಾವಣಗೆರೆ ವಿಶ್ವವಿದ್ಯಾಲಯ | 164 | 178 |
| 11 | ಕುವೆಂಪು ವಿಶ್ವವಿದ್ಯಾಲಯ | 238 | 590 |
| 12 | ಮೈಸೂರು ವಿಶ್ವವಿದ್ಯಾಲಯ | 664 | 1349 |
| 13 | ಬೆಂಗಳೂರು ವಿಶ್ವವಿದ್ಯಾಲಯ | 504 | 1383 |
| 14 | ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 15 | 19 |
| 15 | ಕರ್ನಾಟಕ ವಿಶ್ವವಿದ್ಯಾಲಯ | 679 | 1368 |
| 16 | ಸಂಸ್ಕೃತ ವಿಶ್ವವಿದ್ಯಾಲಯ | 71 | 62 |

| | | | |
|---|---|---|---|
| 17 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 228 | 425 |
| 18 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 56 | 92 |
| 19 | ಮಂಗಳೂರು ವಿಶ್ವವಿದ್ಯಾಲಯ | 273 | 547 |
| 20 | ರಾಯಚೂರು ವಿಶ್ವವಿದ್ಯಾನಿಲಯ | ಈ ವಿಶ್ವವಿದ್ಯಾನಿಲಯಗಳು 2020ನೇ ಸಾಲಿನಿಂದ ಪ್ರಾರಂಭಗೊಂಡಿದ್ದು, ಪ್ರಸ್ತುತ ಯಾವುದೇ ಬೋಧಕ/ಬೋಧಕೇತರ ಹುದ್ದೆಗಳು ಸೃಜನೆಯಾಗಿರುವುದಿಲ್ಲ. | |
| 21 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯ | | |
| 22 | ನೃಪತುಂಗ ವಿಶ್ವವಿದ್ಯಾನಿಲಯ | | |
| 23 | ಮಂಡ್ಯ ವಿಶ್ವವಿದ್ಯಾನಿಲಯ | | |
| | ಒಟ್ಟು | **4158** | **8447** |

| | | |
|---|---|---|
| (ಆ) | ಖಾಲಿ ಹುದ್ದೆಗಳ ಕಾರಣ ಉನ್ನತ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದ್ದಲ್ಲಿ, ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | ವಿಶ್ವವಿದ್ಯಾನಿಲಯಗಳು ಅತಿಥಿ/ತಾತ್ಕಾಲಿಕ ಉಪನ್ಯಾಸಕರನ್ನು ನೇಮಿಸಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ, ಶಿಕ್ಷಣದ ಗುಣಮಟ್ಟ ಕುಸಿಯುತ್ತಿದೆ ಎಂಬ ಪ್ರಶ್ನೆ ಉದ್ಭವಿಸುವುದಿಲ್ಲ.<br><br>ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 136 ಯುಎನ್ಇ 2017, ಬೆಂಗಳೂರು 03.06.2019ರಲ್ಲಿ ಆದೇಶ ಹೊರಡಿಸಲಾಗಿದೆ. |
| (ಇ) | ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆ ಹಾಗೂ ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರ ಇಚ್ಛಿಸಿದೆಯೇ; ಹಾಗಿದ್ದಲ್ಲಿ, ನೇರ ನೇಮಕಾತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೂಲಕ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ, ಎಲ್ಲಾ ವಿಶ್ವವಿದ್ಯಾನಿಲಯಗಳು ಈಗಾಗಲೇ ರಚಿಸಿಕೊಂಡಿರುವ ಪರಿನಿಯಮಾವಳಿಗಳನ್ವಯ/ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಮಾಡಲಾಗುತ್ತದೆ.<br><br>ಪ್ರಸ್ತುತ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ವಿಧಿಸಿರುವ ಆರ್ಥಿಕ ನಿರ್ಬಂಧದನ್ವಯ ಕಲ್ಯಾಣ ಕರ್ನಾಟಕ ಪ್ರದೇಶಗಳನ್ನು ಹೊರತುಪಡಿಸಿ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ. ಆರ್ಥಿಕ ನಿರ್ಬಂಧಗಳು ತೆರವುಗೊಂಡ ನಂತರ ಈ ಬಗ್ಗೆ ವಿಶ್ವವಿದ್ಯಾನಿಲಯಗಳಿಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮಕೈಗೊಳ್ಳುವಂತೆ ತಿಳಿಸಲಾಗುವುದು. |

ಸಂಖ್ಯೆ: ಇಡಿ 358 ಯುಎನ್ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು